ಹೌದು. ಕೊಠಡಿಗಳ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ.

ವಿಷಯ : - 1993-94ನೇ ಸಾಲಿನಲ್ಲಿ ಹಿರೇಕೆರೂರು ತಾಲ್ಲೂಕಿನಲ್ಲಿ ಪ್ರಥಮ ದರ್ಜೆ ಕಾಲೇಜುಗಳ ನಿವೇಶನ ಪಡೆಯಲು ಸರ್ಕಾರದಿಂದ ಕೊಟ್ಟ ಹಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 275(564)

ಶ್ರೀ ಬಿ.ಹೆಚ್.ಬನ್ನಿಕೋಡ್(ಹಿರೇಕೆರೂರು)

ಮಾನ್ಯ ಉನ್ನತ ಶಿಕ್ಷಣ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹಿರೇಕೇರೂರು ತಾಲ್ಲೂಕಿನ ಪ್ರಥಮ ದರ್ಜೆ ಕಾಲೇಜಿಗೆ ಎಷ್ಟು ಕ್ಷೇತ್ರ ನಿವೇಶನವನ್ನು ಪಡೆದುಕೊಳ್ಳಲಾಗಿದೆ. ಹಾಗೂ ಅದಕ್ಕೆ ಸರಕಾರ ಕೊಟ್ಟ ಹಣವೆಷ್ಟು?

ಆ) ಪ್ರಥಮ ದರ್ಜೆ ಕಾಲೇಜು ಕಟ್ಟಡ ಕಾರ್ಯ 1993-94ರಲ್ಲಿ ಪ್ರಾರಂಭಿಸುವ ಬಗ್ಗೆ ಮಾನ್ಯ ಸಚಿವರು ಸದನದಲ್ಲಿ ಭರವಸೆ ಕೊಟ್ಟಿದ್ದು, ಆ ಬಗ್ಗೆ 1993-94ರಲ್ಲಿ ಎಷ್ಟು ಹಣ ಒದಗಿಸಲಾಗಿದೆ.

ಇ) ಆ ಕಟ್ಟಡ ಕಾರ್ಯ ಪ್ರಾರಂಭಿಸಲು ಅವಶ್ಯವಿರುವ ನಕ್ಷೆ ಅಂದಾಜುಗಳನ್ನು ತಯಾರಿಸಲಾಗಿದೆಯೇ;

ಶ್ರೀ ಎಸ್.ಎಂ.ಯಾಹ್ಯಾ

(ಉನ್ನತ ಶಿಕ್ಷಣ ಮತ್ತು ವಕ್ಫ್ ಸಚಿವರು)

ಎಕರೆಗೆ 18,000-00 ರೂ.ಗಳಂತೆ 14 ಏಕರೆ 36 ಗುಂಟೆ ಜಮೀನಿಗೆ ಒಟ್ಟು ರೂ. 2,68,200-00 ಗಳನ್ನು ಮಂಜೂರು ಮಾಡಿದೆ.

ಅನುದಾನ ಒದಗಿಸಿಲ್ಲ.

-ಇಲ್ಲ-

ಭೂ ಸ್ವಾಧೀನಪಡಿಸಿಕೊಂಡ ಕೂಡಲೇ ಅಂದಾಜು ಪಟ್ಟಿ ಮತ್ತು ನಕ್ಷೆ ಕೂಡಲೇ ತಯಾರಿಸಿ ಆಡಳಿತಾತ್ಮಕ ಅನುಮೋದನೆಗೆ ಕಳುಹಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಗುತ್ತಿದೆ.

ವಿಷಯ : - ರಾಜ್ಯದ ಅರಣ್ಯ ಇಲಾಖೆಯಲ್ಲಿ ಅರಣ್ಯ ಶಾಸ್ತ್ರ ಪದವೀಧರರಿಗೆ ಹುದ್ದೆಗಳನ್ನು ಮೀಸಲಾತಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 276(565)

ಶ್ರೀ ಬಿ.ಹೆಚ್.ಬನ್ನಿಕೋಡ್(ಹಿರೇಕೇರೂರ್)

ಮಾನ್ಯ ಅರಣ್ಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಅರಣ್ಯ ಶಾಸ್ತ್ರದಲ್ಲಿ ಪದವೀಧರರಾಗಿರುವವರ ಸಂಖ್ಯೆ ಎಷ್ಟು;

ಆ) ಈವರೆಗೆ ಎಷ್ಟು ಜನ ಪದವೀಧರರನ್ನು ಅರಣ್ಯ ಇಲಾಖೆಯ ನೇಮಕಾತಿಯಲ್ಲಿ ಸೇರಿಸಿಕೊಳ್ಳಲಾಗಿದೆ;

ಇ) ಅರಣ್ಯ ಶಾಸ್ತ್ರದಲ್ಲಿ ವಿಶೇಷ ಅನುಭವ ಪಡೆದಿರುವ ಅರಣ್ಯ ಶಾಸ್ತ್ರ ಪದವೀಧರರಿಗೆ ಅರಣ್ಯ ಇಲಾಖೆಯಲ್ಲಿ ಹುದ್ದೆಗಳನ್ನು ಮೀಸಲಿಡುವುದು ಸೂಕ್ತವೆಂದು ಸರ್ಕಾರವು ಯೋಚಿಸಿದೆಯೇ?

ಈ) ಆ ಬಗ್ಗೆ ಸರ್ಕಾರದ ನೀತಿ ಹಾಗೂ ಕ್ರಮಗಳೇನು?

ಶ್ರೀ ಎಂ.ಪಿ.ಕೇಶವಮೂರ್ತಿ

(ಅರಣ್ಯ ರಾಜ್ಯ ಸಚಿವರು)

78 (1990-91ರವರಿಗೆ)

ಒಬ್ಬರು

ಜಿ.ವಿ.ಕೆ.ರಾವ್ ಸಮಿತಿಯ ವರದಿಯಲ್ಲಿ ವಲಯ ಅರಣ್ಯಾಧಿಕಾರಿಗಳ ಹುದ್ದೆಗಳನ್ನು ಬಹುವಿಧ ವಿಜ್ಞಾನದ ಪದವೀಧರರಿಂದ ಆಯ್ಕೆ ಮಾಡುವುದು ಸೂಕ್ತವೆಂದು ಶಿಫಾರಸ್ಸು ಮಾಡಲಾಗಿದೆ. ಇದಲ್ಲದೆ ಈ ಸದ್ಯ ಬಿ.ಎಸ್ಸಿ (ಫಾರೆಸ್ಟ್ರಿ) ಪದವೀಧರರ ಸಂಖ್ಯೆ : ಕಡಿಮೆ ಇರುವುದರಿಂದ ಈ ಹುದ್ದೆಗಳನ್ನು ಅವರಿಗೆ ಮೀಸಲಿಟ್ಟರೆ ಸ್ಪರ್ಧಾತ್ಮಕ ಆಯ್ಕೆಗೆ ಅವಕಾಶವಾಗುವುದಿಲ್ಲ.

ಈ ಬಗ್ಗೆ ಸರ್ಕಾರದ ನೀತಿ ಹಾಗೂ ಕ್ರಮಗಳೇನು ರೂಪಗೊಂಡಿಲ್ಲ.

ವಿಷಯ : - ರಾಜ್ಯದಲ್ಲಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆಗಳ ಸಂಖ್ಯೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 277(68)

ಪಶ್ರೀ ಬಿ.ಹೆಚ್.ಬನ್ನಿಕೋಡ್(ಹಿರೇಕೆರೂರು)

ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು?(ತಾಲ್ಲೂಕುವಾರು ಮಾಹಿತಿ ನೀಡುವುದು)

ಆ) ಖಾಲಿಯಿರುವ ಹುದ್ದೆಗಳನ್ನು ತುಂಬಲು ಸರ್ಕಾರ ಉದ್ದೇಶಿಸಿದೆಯೇ?

ಇ) ಈ ಹುದ್ದೆಗಳನ್ನು ಯಾವ ವಿಧಾನದಿಂದ ಆಯ್ಕೆಮಾಡಲು ತೀರ್ಮಾನಿಸಲಾಗಿದೆ?

ಈ) ಈ ಬಗ್ಗೆ ಸರ್ಕಾರದ ನಿರ್ದಿಷ್ಟ ಹಾಗೂ ನಿಖರವಾದ ಸ್ಪಷ್ಟ ನಿರ್ಣಯ ಮತ್ತು ಕ್ರಮಗಳನ್ನು ತೆಗೆದುಕೊಂಡಿದೆಯೇ?

ಉ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ನೀತಿ ಮತ್ತು ನಿಯಮಗಳೇನು?

ಶ್ರೀಮತಿ. ನಾಗಮ್ಮ ಸಿ. ಕೇಶವಮೂರ್ತಿ

(ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು)

ದಿನಾಂಕ 30-6-92 ರವರೆಗೆ 4,981 ಹುದ್ದೆಗಳು ಖಾಲಿಯಿದೆ. ಇವುಗಳ ಜಿಲ್ಲಾವಾರು ವಿವರವನ್ನು ಅನುಬಂಧದಲ್ಲಿ ನೀಡಿದೆ.

ಪ್ರತಿ ತರಗತಿಗೆ ಒಬ್ಬ ಶಿಕ್ಷಕನಂತೆ (50:1) ಒದಗಿಸಲು ಉದ್ದೇಶಿಸಿದ್ದು, ಪ್ರಸ್ತುತ ವರ್ಷದಲ್ಲಿ 5,000 ಹುದ್ದೆಗಳನ್ನು ತುಂಬಲು ಉದ್ದೇಶಿಸಿದೆ.

ಹೌದು.

ನೇರ ನೇಮಕಾತಿಯಿಂದ ತುಂಬಲು ಕ್ರಮ ಕೈಗೊಳ್ಳಲಾಗುತ್ತಿದೆ.

ಗ್ರಾಮಾಂತರ ಪ್ರದೇಶದ ಅಭ್ಯರ್ಥಿಗಳಿಗೆ ಕೃಪಾಂಕ ನೀಡುವ ಹಾಗೂ ಮಹಿಳಾ ಅಭ್ಯರ್ಥಿಗಳಿಗೆ ಶೇಕಡ 30ರಷ್ಟು ಹುದ್ದೆ ಮೀಸಲಾತಿಗೆ ಸಂಬಂಧಿಸಿದಂತೆ ಸಾಮಾನ್ಯ ನೇಮಕಾತಿ ನಿಯಮಾವಳಿಗಳಿಗೆ ತಿದ್ದುಪಡಿ ತಂದಿದ್ದು ಕರಡು ನಿಯಮಗಳನ್ನು ಈಗಾಗಲೇ ಪ್ರಕಟಿಸಲಾಗಿದೆ.